# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1237 |
| ಮಾನ್ಯ ಸದಸ್ಯರ ಹೆಸರು | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 17.12.2025 |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕಂದಾಯ ಇಲಾಖೆಯ ಮಹತ್ವಾಕಾಂಕ್ಷಿ "ದರಖಾಸ್ತು ಪೋಡಿ ದುರಸ್ತಿ" ಅಭಿಯಾನಕ್ಕೆ ಹತ್ತಾರು ವಿಘ್ನಗಳು ಎದುರಾಗಿರುವ ಕಾರಣ ದಿಂದಾಗಿ ಬಾಕಿ ಇರುವ ಪ್ರಕರಣಗಳು ತ್ವರಿತವಾಗಿ ವಿಲೇವಾರಿಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br><br>ರಾಜ್ಯದಲ್ಲಿ ದರಖಾಸ್ತು ಪೋಡಿ ಅಭಿಯಾನದಡಿ ಈವರೆಗೆ ಅನುಬಂಧ-1 ರಂತೆ 1,31,003 ಅರ್ಜಿಗಳು ಮೋಜಣಿ ತಂತ್ರಾಂಶದ ಮೂಲಕ ಅಳತೆಗೆ ಸ್ವೀಕೃತವಾಗಿವೆ. ಈ ಪೈಕಿ 1,14,873 ಮಂಜೂರಿದಾರರ ಜಮೀನು ಅಳತೆ ಮಾಡಿ 55,459 ಮಂಜೂರಿದಾರರಿಗೆ ದುರಸ್ತಿ ಪಡಿಸಲಾಗಿದೆ. ಅಳತೆಗಾಗಿ 16,130 ಅರ್ಜಿಗಳು ಬಾಕಿ ಇರುತ್ತವೆ. |
| (ಆ) | ಬಂದಿದ್ದಲ್ಲಿ, ಈ ವರ್ಷದಲ್ಲಿ "ದರಖಾಸ್ತು ಪೋಡಿ ದುರಸ್ತಿ" ಅಭಿಯಾನದಡಿ ಎಷ್ಟು ಪ್ರಕರಣಗಳಲ್ಲಿ ಸಮೀಕ್ಷೆ ಮುಗಿದಿದೆ ಹಾಗೂ ಎಷ್ಟು ಪ್ರಕರಣಗಳಲ್ಲಿ ಪೋಡಿ ದುರಸ್ತಿ ಪ್ರಕ್ರಿಯೆ ಪೂರ್ಣಗೊಂಡಿದೆ ಇನ್ನೂ ಸಮೀಕ್ಷೆಯೇ ಆಗದ ಎಷ್ಟು ಪ್ರಕರಣಗಳಿವೆ; | |
| (ಇ) | ದರಖಾಸ್ತು ಪೋಡಿ ದುರಸ್ತಿ ಕಾರ್ಯವನ್ನು ತ್ವರಿತವಾಗಿ ನಡೆಸಲು ಸರ್ಕಾರ ಇದುವರೆಗೆ ಕೈಗೊಂಡಿರುವ ಕ್ರಮಗಳೇನು; | **ದರಖಾಸ್ತು ಪೋಡಿ ಅಭಿಯಾನದಲ್ಲಿ ಪೋಡಿ ದುರಸ್ತಿ ಕಾರ್ಯವನ್ನು ತ್ವರಿತವಾಗಿ ನಡೆಸುವ ಸಲುವಾಗಿ ಸರ್ಕಾರ ಕೈಗೊಂಡ ಕ್ರಮಗಳು ಈ ಕೆಳಕಂಡಂತಿವೆ:-** |
| ಈ) | ಸದ್ಯ ಎದುರಾಗಿರುವ ಅಡಚಣೆಗಳನ್ನು ನಿವಾರಿಸಿ, ದರಖಾಸ್ತು ಪೋಡಿ ದುರಸ್ತಿಯಾಗಿ ಪಹಣಿ ಇಂಡೀಕರಣ ಮಾಡುವ ಪ್ರಕ್ರಿಯೆಯನ್ನು ತ್ವರಿತವಾಗಿ ಮಾಡಲು ಸರ್ಕಾರ ಈ ಕೂಡಲೇ ಸೂಕ್ತ ಹಾಗೂ ಅಗತ್ಯ ಕ್ರಮ ವಹಿಸುವುದೇ? | 1. ದರಖಾಸ್ತು ಪೋಡಿ ಕುರಿತಂತೆ ನಮೂನೆ 01 ರಿಂದ 05 ಮತ್ತು 06 ರಿಂದ 10 ಗಳ ಭರ್ತಿ ಮತ್ತು ದೃಢೀಕರಿಸುವ ಪ್ರಕ್ರಿಯೆಯನ್ನು ಸರ್ಕಾರದ ಆದೇಶ ಸಂ: ಕಂಇ 156 ಎಸ್‌ಎಸ್‌ಎಂ 2024 ದಿನಾಂಕ 25-11-2024 ರಡಿ ಸರಳೀಕರಿಸಿ, ಸ.ನಂ ನ ಎಲ್ಲಾ ಮಂಜೂರಿದಾರರಿಗೆ ಏಕಕಾಲದಲ್ಲಿ ಪೋಡಿ ದುರಸ್ತಿ ಪಡಿಸಲು ಆದೇಶಿಸಿದೆ.<br>2. ದರಖಾಸ್ತು ಪೋಡಿ ಪ್ರಕರಣಗಳಲ್ಲಿ ನಮೂನೆ 01 ರಿಂದ 05 ಗಳನ್ನು ಭರ್ತಿ ಮಾಡಿ ಡಿಜಿಟಲ್ ಮೇಲು ಸಹಿ ಮಾಡಲು & ಅದೇ ರೀತಿ ಅಳತೆ ಪ್ರಕರಣಗಳ ನಿರ್ವಹಣೆಯನ್ನು ಆನ್ ಲೈನ್ ನಲ್ಲಿ ನಿರ್ವಹಿಸುವ ಸಲುವಾಗಿ ಭೂಮಿ ಉಸ್ತುವಾರಿ ಕೋಶದಿಂದ ತಂತ್ರಾಂಶ ಅಭಿವೃದ್ಧಿ ಪಡಿಸಲಾಗಿದೆ.<br>3. ದರಖಾಸ್ತು ಪೋಡಿ, 11ಇ, ಹದ್ದುಬಸ್ತು |

| | | |
|---|---|---|
| | | ಮುಂತಾದ ಎಲ್ಲಾ ತರಹದ ಅರ್ಜಿಗಳನ್ನು ಸರ್ಕಾರಿ ಭೂಮಾಪಕರೊಂದಿಗೆ ಪರವಾನಗಿ ಭೂಮಾಪಕರನ್ನು ಸಹ ಬಳಸಿಕೊಂಡು ಅಳತೆ ಮಾಡಲು ಆದೇಶಿಸಿದೆ.<br>4. ವಿಡಿಯೋ ಸಂವಾದ ಮತ್ತು ವಿಭಾಗವಾರು ಅಧಿಕಾರಿ ಗಳ ಸಭೆ ನಡೆಸಿ ಪ್ರಗತಿ ಪರಿಶೀಲನೆ ಮಾಡಿ ಹೆಚ್ಚಿನ ಪ್ರಗತಿ ಸಾಧಿಸಲು ಸೂಕ್ತ ಮಾರ್ಗದರ್ಶನ ಮತ್ತು ಅಗತ್ಯ ಸೂಚನೆ ನೀಡಲಾಗುತ್ತಿದೆ.<br>5. ಹೆಚ್ಚಿನ ಪ್ರಕರಣಗಳು ಬಾಕಿ ಇರುವ ತಾಲ್ಲೂಕುಗಳಿಗೆ ಕಡಿಮೆ ಪ್ರಕರಣಗಳು ಬಾಕಿ ಇರುವ ತಾಲ್ಲೂಕಿನಿಂದ ಭೂಮಾಪಕರನ್ನು ನಿಯೋಜನೆ ಮಾಡಿ ಪ್ರಕರಣ ಗಳನ್ನು ಶೀಘ್ರವಾಗಿ ವಿಲೇಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br>ಇದರಿಂದ ದರಖಾಸ್ತು ಪೋಡಿ ಅರ್ಜಿಗಳನ್ನು ಶೀಘ್ರವಾಗಿ ವಿಲೇವಾರಿ ಮಾಡಲು ಸಾಧ್ಯವಾಗುತ್ತಿದೆ. |

**ಸಂಖ್ಯೆ: ಕಂಇ 228 ಎಸ್‌ಎಸ್‌ಸಿ 2025**

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು